SINE(8)

(11)

(35)

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:01 ಕ್ಕೆ ಉತ್ತರ

ಗ ಸೂ ಸ

**ಪ್ರಶ್ನೆ:**

ಕರ್ನಾಟಕ ರಾಜ್ಯದ ಕರಾವಳಿ ಭಾಗದಲ್ಲಿ ಶತಶತಮಾನಗಳಿಂದ ತನ್ನದೇ ಆದ ಐತಿಹಾಸಿಕ ನೆಲೆಯನ್ನು ಹಾಗೂ ಪಾರಂಪರಿಕ ಕಂಬಳಕ್ಕೆ ಶತಮಾನಗಳ ಇತಿಹಾಸವಿದೆ. ಹಿಂದಿನ ಕಾಲದಲ್ಲಿ ರಾಜರುಗಳ ಬೆಂಬಲ ಮತ್ತು ಪ್ರೋತ್ಸಾಹದೊಂದಿಗೆ ಈ ಕ್ರೀಡೆ ನಡೆಯುತ್ತಿತ್ತು. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಉಳುಮೆಗಾಗಿ ಕೋಣಗಳನ್ನು ಬಳಸುವುದು ಸಾಮಾನ್ಯ. ಅವುಗಳಲ್ಲಿ ಬಲಿಷ್ಟವಾದವುಗಳ ಮಧ್ಯೆ ಓಟದ ಸ್ಪರ್ಧೆ ಏರ್ಪಡಿಸಿ ವಿಜೇತರಾದವರನ್ನು ಸನ್ಮಾನಿಸುವುದರ ಹಿಂದೆ ಕೃಷಿಕರ ಕ್ರೀಡಾ ಮನೋಭಾವಕ್ಕೆ ಇಂಬು ಕೊಡುವುದಾಗಿತ್ತು. ಅಂತೆಯೇ ಕೋಣಗಳನ್ನು ಚೆನ್ನಾಗಿ ಸಲಹಲು ಇದೊಂದು ನೆವವೂ ಹೌದು.

ಈ ಹಿನ್ನಲೆಯಲ್ಲಿ ಕಂಬಳ ಕ್ರೀಡೆಯನ್ನು ಕರ್ನಾಟಕದ "ರಾಜ್ಯ ಕ್ರೀಡೆ" ಅಥವಾ "ನಾಡ ಕ್ರೀಡೆ" ಯೆಂದು ಘೋಷಿಸಿ ಅಗತ್ಯ ಅನುದಾನವನ್ನು ನೀಡಿ ಕಂಬಳ ಕ್ರೀಡೆಯನ್ನು ಇನ್ನೂ ಎತ್ತರಕ್ಕೇರಿಸಲು ರಾಜಾಶ್ರಯ ನೀಡುವಂತೆ ಕೋರುತ್ತೇನೆ.

**ಉತ್ತರ:**

ಕರಾವಳಿ ಭಾಗದ ಸಾಂಪ್ರದಾಯಿಕ ಕಂಬಳ ಕ್ರೀಡೆಯನ್ನು ಪ್ರೋತ್ಸಾಹಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಕೆಳಗೆ ವಿವರಿಸಿದಂತೆ ಹಲವು ಉತ್ತೇಜಕ ಕ್ರಮಗಳನ್ನು ಕೈಗೊಂಡಿದೆ :-

**ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ:**

ಗ್ರಾಮೀಣ ಮತ್ತು ಪಾರಂಪರಿಕ ಕ್ರೀಡಾ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಕಂಬಳ ಕ್ರೀಡೆಯ ಸಾಧಕರಿಗೆ '**ವಿಶೇಷ ಕ್ರೀಡೆ**'ಗಳ ಅಡಿಯಲ್ಲಿ '**ಕರ್ನಾಟಕ ಕ್ರೀಡಾ ರತ್ನ**' ಪ್ರಶಸ್ತಿ ನೀಡಲಾಗುತ್ತಿದೆ. ಈ ಪ್ರಶಸ್ತಿಯು ಸ್ಮರಣಿಕೆ ಹಾಗೂ ರೂ 1.00 ಲಕ್ಷ ನಗದು ಪುರಸ್ಕಾರ ಒಳಗೊಂಡಿರುತ್ತದೆ. 2013 ರಿಂದ ಈ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು, ಪ್ರಶಸ್ತಿ ವಿಜೇತರ ವಿವರ ಕೆಳಕಾಣಿಸಿದಂತಿದೆ:-

| ಕ್ರಸ | ಕಂಬಳ ಕ್ರೀಡೆಯ ಸಾಧಕರು | ವರ್ಷ |
|---|---|---|
| 1 | ಶ್ರೀ ಪಲಿಮಾರು ದೇವೇಂದ್ರ ಕೋಟ್ಯಾನ್ | 2013 |
| 2 | ಶ್ರೀ ನಕರೆ ಜಯಕರ ಮಡಿವಾಳ | 2014 |
| 3 | ಶ್ರೀ ಕೊಳಚೂರು ಕೊಂಡೊಟ್ಟು ಸುಕುಮಾರ ಶೆಟ್ಟಿ | 2014 |
| 4 | ಶ್ರೀ ಬಾರಾಡಿಬೀಡು ಡಾ. ಜೀವಂಧರ್ ಬಲ್ಲಾಳ್ | 2015 |
| 5 | ಶ್ರೀ ಆನಂದ್ ಇರ್ವತ್ತೂರ್ | 2015 |
| 6 | ಶ್ರೀ ಯುವರಾಜ್ ಜೈನ್ ನಾರಾವಿ | 2016 |
| 7 | ಶ್ರೀ ಗೋಪಾಲಕೃಷ್ಣ ಪ್ರಭು | 2017 |
| 8 | ಶ್ರೀ ಶ್ರೀನಿವಾಸಗೌಡ | 2017 |
| 9 | ಶ್ರೀ ಸುರೇಶ್ ಶೆಟ್ಟಿ | 2018 |
| 10 | ಶ್ರೀ ಪ್ರವೀಣ್ ಕೊಟ್ಯಾನ್ ಪಣಪಿಲ್ | 2019 |
| 11 | ಶ್ರೀ ಗೋಪಾಲ್ ನಾಯಕ್ | 2020 |
| 12 | ಶ್ರೀ ಶ್ರೀಧರ್ ಮರೋಡಿ | 2021 |

## ಕ್ರೀಡಾ ಪೋಷಕ ಪ್ರಶಸ್ತಿ:

ಕ್ರೀಡಾ ಕ್ಷೇತ್ರದ ಬೆಳವಣಿಗೆಗೆ ಗಣನೀಯ ಕೊಡುಗೆ ನೀಡಿರುವ ಸಂಸ್ಥೆಗಳನ್ನು ಗುರುತಿಸಿ ರೂ 5.00 ಲಕ್ಷ ನಗದು ಪುರಸ್ಕಾರ ಮತ್ತು ಸ್ಮರಣಿಕೆಯನ್ನು ಒಳಗೊಂಡ '**ಕ್ರೀಡಾ ಪೋಷಕ ಪ್ರಶಸ್ತಿ**'ಯನ್ನು ನೀಡಲಾಗುತ್ತಿದ್ದು, 2017-18ನೇ ಸಾಲಿನ ಕಂಬಳ ಕ್ರೀಡೆಯ ಬೆಳವಣಿಗೆಗೆ ಗಣನೀಯ ಕೊಡುಗೆ ನೀಡಿರುವ **ಕಂಬಳ ಸಂರಕ್ಷಣೆ, ನಿರ್ವಹಣೆ ಮತ್ತು ತರಬೇತಿ ಅಕಾಡೆಮಿ (ರಿ), ಕಾರ್ಕಳ, ಉಡುಪಿ ಜಿಲ್ಲೆ** ಈ ಸಂಸ್ಥೆಗೆ 'ಕ್ರೀಡಾ ಪೋಷಕ ಪ್ರಶಸ್ತಿ'ಯನ್ನು ನೀಡಿ ಗೌರವಿಸಲಾಗಿದೆ.

## ಕಂಬಳ ಕ್ರೀಡೆಗೆ ಮೂಲಸೌಕರ್ಯಗಳ ಸೃಜನೆ:

- ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದ್ರೆಯ '**ವೀರ ರಾಣಿ ಅಬ್ಬಕ್ಕ ಸಂಸ್ಕೃತಿ ಗ್ರಾಮ**'ದಲ್ಲಿ 10 ಎಕರೆ ಜಾಗದಲ್ಲಿ '**ಕೋಟಿ-ಚೆನ್ನಯ್ಯ**' ಹೆಸರಿನ ಜೋಡುಕರೆಯನ್ನು ನಿರ್ಮಾಣ ಮಾಡಲಾಗಿದ್ದು, ವೀಕ್ಷಕರ ಗ್ಯಾಲರಿ ಮತ್ತಿತರ ಅಗತ್ಯ ಮೂಲಸೌಕರ್ಯಗಳೊಂದಿಗೆ ಕಂಬಳ ಕ್ರೀಡಾಂಗಣವನ್ನು ನಿರ್ಮಿಸಲಾಗಿದೆ.
- ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನ ಮಿಯ್ಯಾರಿನಲ್ಲಿ 5 ಎಕರೆ ನಿವೇಶನದಲ್ಲಿ '**ಲವ-ಕುಶ**' ಹೆಸರಿನ ಕಂಬಳ ಕ್ರೀಡಾಂಗಣವನ್ನು ನಿರ್ಮಿಸಲಾಗಿದೆ. ಈ ಕಂಬಳ ಕ್ರೀಡಾಂಗಣಗಳನ್ನು ನಿರ್ಮಿಸಲು ಸರ್ಕಾರವು ಅನುದಾನವನ್ನು ಒದಗಿಸಿದ್ದು, ಪ್ರತಿ ವರ್ಷ ಈ ಕಂಬಳ ಕ್ರೀಡಾಂಗಣಗಳಲ್ಲಿ ಯಶಸ್ವಿಯಾಗಿ ಕಂಬಳವನ್ನು ಆಯೋಜಿಸಲಾಗುತ್ತಿದೆ.

## ಕಂಬಳ ಕ್ರೀಡೆ ಆಯೋಜನೆಗೆ ಅನುದಾನ:

- ಕಂಬಳದ ಸಂಘಟನೆಗೆ ಪ್ರಕರಣವಾರು ಪರಿಶೀಲಿಸಿ ಅನುದಾನ ನೀಡಲಾಗುತ್ತಿದ್ದು, 2019-20ನೇ ಸಾಲಿನಲ್ಲಿ ಮೂಡುಬಿದ್ರೆಯಲ್ಲಿ ಆಯೋಜಿಸಲಾದ "ಕೋಟಿ-ಚೆನ್ನಯ್ಯ ಜೋಡು ಕೆರೆ "ಕಂಬಳಕ್ಕೆ ರೂ 5.00 ಲಕ್ಷ ಅನುದಾನವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅನುದಾನ ಸಂಸ್ಥೆಯಾದ ಕರ್ನಾಟಕ ಕ್ರೀಡಾ ಪ್ರಾಧಿಕಾರದಿಂದ ಒದಗಿಸಲಾಗಿದೆ.
- ದಿನಾಂಕ 11-12-2021 ರಂದು ಮೂಡುಬಿದ್ರೆಯಲ್ಲಿ ಆಯೋಜಿಸಲಾದ ""ಕೋಟಿ-ಚೆನ್ನಯ್ಯ ಜೋಡು ಕೆರೆ "ಕಂಬಳಕ್ಕೆ ರೂ 5.00 ಲಕ್ಷ ಅನುದಾನವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅನುದಾನ ಸಂಸ್ಥೆಯಾದ ಕರ್ನಾಟಕ ಕ್ರೀಡಾ ಪ್ರಾಧಿಕಾರದಿಂದ ಒದಗಿಸಲಾಗಿದೆ.
- ದಿನಾಂಕ 08-01-2023 ಮತ್ತು 09-01-2023 ರಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಉಡುಪಿ ಜಿಲ್ಲೆಯಲ್ಲಿ ಗ್ರಾಮೀಣ ಕ್ರೀಡೋತ್ಸವ ಕ್ರೀಡಾಕೂಟ ಆಯೋಜನೆ ಸಂದರ್ಭದಲ್ಲಿ ಕಂಬಳ ಕ್ರೀಡೆಯನ್ನು ಯಶಸ್ವಿಯಾಗಿ ಆಯೋಜಿಸಲಾಗಿದೆ.
- ದಿನಾಂಕ 25-11-2023 ರಿಂದ 26-11-2023 ರವರೆಗೆ ನಡೆದ ಬೆಂಗಳೂರು ಕಂಬಳಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ರೂ 100.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿದೆ.

ಮಾನ್ಯ ವಿಧಾನ ಪರಿಷತ್ತಿನ ಸಭಾಪತಿಯವರ ಅಧ್ಯಕ್ಷತೆಯಲ್ಲಿ ಮಾನ್ಯ ಸಚಿವರು ಹಾಗೂ ವಿಧಾನ ಪರಿಷತ್ ಸದಸ್ಯರುಗಳ ಉಪಸ್ಥಿತಿಯಲ್ಲಿ ದಿನಾಂಕ: 19-04-2022ರಂದು ನಡೆದ ಸಭೆಯಲ್ಲಿ ರಾಜ್ಯ ಕಂಬಳ ಸಂಸ್ಥೆಯನ್ನು ರಚಿಸಿ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ಮಾನ್ಯತೆ ಪಡೆಯುವ ಕುರಿತಂತೆ

ಬೈಲಾ ಸಿದ್ಧಪಡಿಸಿ ಮಾನ್ಯತೆಗಾಗಿ ಸಲ್ಲಿಸುವಂತೆ ತೀರ್ಮಾನಿಸಲಾಗಿದ್ದು, ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ರಾಜ್ಯ ಕಂಬಳ ಸಂಸ್ಥೆಯನ್ನು ರಚಿಸುವ ಸಂಬಂಧ ಸೂಕ್ತ ಸಹಕಾರವನ್ನು ನೀಡುವಂತೆ ದಿನಾಂಕ 18-05-2022 ರ ಪತ್ರದಲ್ಲಿ ಕೋರಲಾಗಿದೆ.

ದಿನಾಂಕ 17-06-2022 ರಂದು ಕರ್ನಾಟಕ ರಾಜ್ಯ ಕಂಬಳ ಸಂಸ್ಥೆಯನ್ನು ರಚಿಸಲು ಬೈಲಾ ಮತ್ತು ಮಾರ್ಗಸೂಚಿಯನ್ನು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆ ಕಂಬಳ ಕ್ರೀಡೆಯ ಅಧ್ಯಕ್ಷರುಗಳು ಹಾಗೂ ಪದಾಧಿಕಾರಿಗಳನ್ನೊಳಗೊಂಡ ಪೂರ್ವಭಾವಿ ಸಭೆಯನ್ನು ನಡೆಸಲಾಗಿದೆ. ಸದರಿ ಸಭೆಯಲ್ಲಿ ಬೈಲಾ ಮತ್ತು ಮಾರ್ಗಸೂಚಿಗಳಲ್ಲಿ ಬದಲಾವಣೆಗಳನ್ನು ಕೈಗೊಂಡು ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಗಳ ಸಮಕ್ಷಮ ಉಭಯ ಜಿಲ್ಲೆಗಳ ಜನಪ್ರತಿನಿಧಿಗಳು, ಕಂಬಳ ಕ್ರೀಡಾಸಕ್ತರು, ಕಂಬಳ ಆಯೋಜಕರು, ಕಂಬಳ ಕೋಣಗಳ ಮಾಲೀಕರು, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹಾಗೂ ತಜ್ಞರ ಸಭೆ ನಡೆಸಿ ಅನುಮೋದನೆ ಪಡೆದು ಬೈಲಾವನ್ನು ಅಂತಿಮಗೊಳಿಸಿ ಕರ್ನಾಟಕ ರಾಜ್ಯ ಕಂಬಳ ಸಂಸ್ಥೆಯನ್ನು ಕರ್ನಾಟಕ ಸಂಘ ಸಂಸ್ಥೆಗಳ ನೋಂದಣಿ ನಿಯಮ 1960ರಡಿ ನೋಂದಾಯಿಸಲು ಕ್ರಮಕೈಗೊಳ್ಳಲು ತೀರ್ಮಾನಿಸಲಾಗಿರುತ್ತದೆ.

**ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ಇವರು ಪತ್ರ ದಿನಾಂಕ 17-04-2023 ರ ಪತ್ರದಲ್ಲಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ದಕ್ಷಿಣ ಕನ್ನಡ ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕರ್ನಾಟಕ ರಾಜ್ಯ ಕಂಬಳ ಸಂಸ್ಥೆಯನ್ನು ರಚಿಸುವ ಸಂಬಂಧ ಚರ್ಚಿಸಲಾಗಿದ್ದು, ಸಭೆಯಲ್ಲಿ ರಾಜ್ಯ ಕಂಬಳ ಸಂಸ್ಥೆ ರಚಿಸಲು ಎರಡು ತಂಡಗಳು ಮುಂದಾಗಿರುವುದರಿಂದ ಈ ವಿಷಯದಲ್ಲಿ ಯಥಾಸ್ಥಿತಿ ಮುಂದುವರೆಸಲು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಸೂಚಿಸಿದ್ದು, ಕರ್ನಾಟಕ ರಾಜ್ಯ ಕಂಬಳ ಸಂಸ್ಥೆ ರಚನೆ ವಿಷಯದಲ್ಲಿ ಯಥಾ ಸ್ಥಿತಿಯನ್ನು ಮುಂದುವರೆಸಲು ತೀರ್ಮಾನಿಸಲಾಗಿರುತ್ತದೆ ಎಂದು ಸ್ಪಷ್ಟಪಡಿಸಲಾಗಿದೆ.**

ಕರ್ನಾಟಕ ರಾಜ್ಯ ಕಂಬಳ ಸಂಸ್ಥೆಯು ರಚನೆಗೊಂಡು ಅಗತ್ಯ ದಾಖಲಾತಿಯೊಂದಿಗೆ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ಮಾನ್ಯತೆಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ರಾಜ್ಯ ಕಂಬಳ ಸಂಸ್ಥೆಗೆ ರಾಜ್ಯ ಕ್ರೀಡಾ ಸಂಸ್ಥೆಯಾಗಿ ಮಾನ್ಯತೆ ನೀಡುವ ಬಗ್ಗೆ ನಿಯಮಾನುಸಾರ ಪರಿಶೀಲಿಸಲಾಗುವುದು.

ಕಂಬಳ ಕ್ರೀಡೆಯನ್ನು ರಾಜ್ಯ ಕ್ರೀಡೆ ಅಥವಾ ಕರಾವಳಿಯ ನಾಡ ಕ್ರೀಡೆಯಾಗಿ ಘೋಷಿಸಿ, ವಾರ್ಷಿಕ ಅನುದಾನ ನೀಡುವ ಬಗ್ಗೆ ಈ ಎಲ್ಲಾ ಪ್ರಕ್ರಿಯೆ ಪೂರ್ಣಗೊಂಡ ನಂತರದಲ್ಲಿ ನಿಯಮಗಳ ಅಡಿಯಲ್ಲಿನ ಅವಕಾಶಗಳನ್ವಯ ಪರಿಶೀಲಿಸಬೇಕಾಗುತ್ತದೆ.

ವೈಎಸ್‌ಡಿ/ಇಬಿಬಿ/14/2024

**(ಬಿ. ನಾಗೇಂದ್ರ)**
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು